# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1030 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್ |
| ಉತ್ತರಿಸಬೇಕಾದ ದಿನಾಂಕ | : | 23.02.2024 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ವಸತಿ ಶಾಲೆಗಳಲ್ಲಿ ಇರುವ ವಿದ್ಯಾರ್ಥಿನಿಯರ ಮೇಲೆ ಲೈಂಗಿಕ ದೌರ್ಜನ್ಯ ನಡೆದಿರುವ ಪ್ರಕರಣಗಳು ಬೆಳಕಿಗೆ ಬಂದಿದ್ದು, ಈ ಕುರಿತು ಸಂಪೂರ್ಣ ವಿವರ ನೀಡುವುದು; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆಗಳಲ್ಲಿ ಲೈಂಗಿಕ ದೌರ್ಜನ್ಯ ಕುರಿತ 16 ಪ್ರಕರಣಗಳಿರುತ್ತವೆ.<br>1) ಈ ಪೈಕಿ 05 ಪ್ರಕರಣಗಳಲ್ಲಿ ಇಲಾಖಾ ವಿಚಾರಣೆ ಮುಗಿದಿದ್ದು, ಅಂತಿಮ ಆದೇಶಕ್ಕೆ ಕಡತ ಚಲನ ವಲನದಲ್ಲಿರುತ್ತದೆ.<br>2) 05 ಪ್ರಕರಣಗಳಲ್ಲಿ ಸಾಕ್ಷಿಗಳ ವಿಚಾರಣೆ ನಡೆಯುತ್ತಿರುತ್ತದೆ.<br>3) 02 ಪ್ರಕರಣಗಳಲ್ಲಿ ಆರೋಪಿತ ನೌಕರರ ವಿರುದ್ಧ ಜಾರಿ ಮಾಡಲಾಗಿರುವ ಆರೋಪ ಪಟ್ಟಿಗೆ ನೀಡಿರುವ ಸಮಜಾಯಿಷಿಯು ಪರಿಶೀಲನೆಯಲ್ಲಿರುತ್ತದೆ.<br>4) 04 ಪ್ರಕರಣಗಳಲ್ಲಿ ಆರೋಪ ಪಟ್ಟಿ ಜಾರಿ ಮಾಡಬೇಕಾಗಿರುತ್ತದೆ. |
| ಆ) | ಅಫಜಲಪುರ ತಾಲ್ಲೂಕಿನ ಮೊರಾರ್ಜಿ ದೇಸಾಯಿ ವಸತಿ ಶಾಲೆ ವಿದ್ಯಾರ್ಥಿನಿ ಮಗುವಿಗೆ ಜನ್ಮ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br>ಮೊರಾರ್ಜಿ ದೇಸಾಯಿ ವಸತಿ ಶಾಲೆ, ಅರ್ಜುನಗಿ, ಅಫಜಲಪುರ ತಾಲ್ಲೂಕು, ಕಲಬುರಗಿ ಜಿಲ್ಲೆ ಇಲ್ಲಿ ವ್ಯಾಸಂಗ ಮಾಡುತ್ತಿರುವ 10ನೇ ತರಗತಿ ವಿದ್ಯಾರ್ಥಿನಿಗೆ ಸೊಲ್ಲಾಪುರದ ಸನ್‌ರೈಸ್ ಖಾಸಗಿ ಆಸ್ಪತ್ರೆಯಲ್ಲಿ ದಿನಾಂಕ:26.12.2023ರ ಬೆಳಗ್ಗೆ ಗಂಡು ಮಗುವಿಗೆ ಜನ್ಮ ನೀಡಿರುತ್ತಾಳೆ. ಅಪ್ರಾಪ್ತ ಬಾಲಕಿಯಾದ ಕಾರಣ ನಿಂಬಾರ್ಗ ಪೋಲಿಸ್ ಠಾಣೆಯಲ್ಲಿ F.I.R ದಾಖಲಾಗಿರುತ್ತದೆ. ಸದರಿ ವಿದ್ಯಾರ್ಥಿನಿಯು ಕಳೆದ ವರ್ಷ ದಿನಾಂಕ:18.03.2023 ರಂದು 9ನೇ ತರಗತಿ ಪರೀಕ್ಷೆಯನ್ನು ಮುಗಿಸಿಕೊಂಡು ತನ್ನ ಮನೆಗೆ ಹೋದಾಗ ದಿನಾಂಕ:19.03.2023 ರಂದು ವಿದ್ಯಾರ್ಥಿನಿಯ ಸ್ವಂತ ದೊಡ್ಡಪ್ಪನ ಮಗನಾದ ಆಕಾಶ್ ತಂದೆ ಮನೋಹರ್ ಕಡಗಂಚಿ ಬಲವಂತವಾಗಿ ಅತ್ಯಾಚಾರವೆಸಗಿರುತ್ತಾರೆಂದು ವಿದ್ಯಾರ್ಥಿನಿಯು ಹೇಳಿಕೆ ನೀಡಿರುವುದಾಗಿ F.I.R ದಾಖಲಾಗಿರುತ್ತದೆ. ಪೋಕ್ಸೋ ಕಾಯಿದೆಯಡಿಯಲ್ಲಿ ಆಕಾಶ ನನ್ನು ಬಂಧನಕ್ಕೊಳಪಡಿಸಲಾಗಿತ್ತು ಎಂದು ತಿಳಿದು ಬಂದಿರುತ್ತದೆ.<br><br>ಈ ಘಟನೆಯ ಹಿನ್ನಲೆಯಲ್ಲಿ ಸದರಿ ವಸತಿ ಶಾಲೆಯ ಪ್ರಾಂಶುಪಾಲರಾದ ಶ್ರೀ ಮಲಕಪ್ಪ ಬಿರಾದರ್ ಹಾಗೂ ಶ್ರೀ ಜಾವೇದ್ ಪಾಟೀಲ್ ನಿಲಯಪಾಲಕರು ಇವರನ್ನು ದಿನಾಂಕ:17.01.2024ರಂದು ಅಮಾನತ್ತು ಮಾಡಿ ಆದೇಶಿಸಲಾಗಿರುತ್ತದೆ. |

| | | |
|---|---|---|
| ಇ) | ವಸತಿ ಶಾಲೆಯಲ್ಲಿ ಇರುವ ವಿದ್ಯಾರ್ಥಿನಿಯರಿಗೆ ಅಸುರಕ್ಷತೆ, ಭಯ ಹಾಗೂ ಮಾನಸಿಕ ಕಿರುಕುಳದಿಂದ ರಕ್ಷಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲಾ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯಗಳಲ್ಲೇ ವಾಸ್ತವ್ಯ ಇರುವುದರಿಂದ ವಿದ್ಯಾರ್ಥಿಗಳ ಆರೋಗ್ಯ ಹಾಗೂ ದೈನಂದಿನ ಚಟುವಟಿಕೆಗಳ ಮೇಲೆ ವಿಶೇಷ ಗಮನ ಹರಿಸಲು ಹಾಗೂ ಇಂತಹ ಅಹಿತಕರ ಘಟನೆಗಳು ಮರುಕಳಿಸದೆ ಇರಲು ಎಚ್ಚರಿಕೆ ವಹಿಸಲು ಸುತ್ತೋಲೆಗಳನ್ನು ಹೊರಡಿಸಲಾಗಿರುತ್ತದೆ. ಒಂದು ವೇಳೆ ಇಂತಹ ಘಟನೆಗಳು ಸಂಭವಿಸಿದಲ್ಲಿ ಸಂಬಂಧಿಸಿದ ವಸತಿ ಶಾಲಾ ಪ್ರಾಂಶುಪಾಲರು, ನಿಲಯಪಾಲಕರು ಹಾಗೂ ಶುಶ್ರೂಷಕರನ್ನೇ ನೇರ ಹೊಣೆಗಾರರನ್ನಾಗಿಸಿ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲು ಕ್ರಮವಹಿಸಲಾಗುತ್ತಿದೆ. |

ಸಕಇ 77 ಎಂಡಿಎಸ್ 2024

(ಡಾ||ಹೆಚ್.ಸಿ. ಮಹದೇವಪ್ಪ )
ಸಮಾಜ ಕಲ್ಯಾಣ ಸಚಿವರು